



ಅರುಣ ಪಿ. ಭಟ್ಟ


## ವಾರಭವಿಷ್ಯ: 06.11.2025ರಿಂದ 12.11.2025ರವರೆಗೆ




ಬೌದ್ಧಿಕ ಶಕ್ತಿಯಿಂದ ವಿಶೇಷ ಗೌರವಕ್ಕೆ ಪಾತ್ರರಾಗುತ್ತೀರಿ. ಸ್ಪರ್ಧೆಯಲ್ಲಿ ಉತ್ತಮ ಸ್ಥಾನ ಪಡೆಯಲಿದ್ದೀರಿ. ಮಕ್ಕಳು ಯಶಸ್ಸು ಪಡೆಯಲು ಪ್ರೋತ್ಸಾಹ ನೀಡಲಿದ್ದೀರಿ. ಹಣಕಾಸು ವಿಚಾರದಲ್ಲಿ ಪ್ರಗತಿ ಇದೆ. ಸಾಲ ಮರುಪಾವತಿಗೆ ಸಂಬಂಧಿಸಿದಂತೆ ಸಮಸ್ಯೆಗಳು ಎದುರಾಗಬಹುದು. ಪ್ರೀತಿಪಾತ್ರರ ಜತೆಗೆ ಉತ್ತಮ ಸಮಯ ಕಳೆಯಲಿದ್ದೀರಿ. ಶುಭದಿನ: 06. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ಜೀವನಮಟ್ಟ ಮೇಲಕ್ಕೆ ಏರಲಿದೆ. ವಿಲಾಸಿ ವಸ್ತುಗಳನ್ನು ಖರೀದಿಸುವ ಯೋಗ ಇದೆ. ದೈಹಿಕ ಕ್ಷಮತೆ ಹೆಚ್ಚಾಗಲಿದೆ. ನಿತ್ಯದ ಚಟುವಟಿಕೆಗಳನ್ನು ಇನ್ನಷ್ಟು ಉತ್ಸಾಹದಿಂದ ಮಾಡಲಿದ್ದೀರಿ. ವೈವಾಹಿಕ ಜೀವನದ ಕಡೆಗೆ ಹೆಚ್ಚು ಲಕ್ಷ್ಯ ನೀಡಿ. ಸಂಗಾತಿಯ ಅಗತ್ಯಗಳಿಗೆ ಸ್ಪಂದಿಸಿ. ಪ್ರೀತಿಪಾತ್ರರ ಜತೆಗಿನ ಬಾಂಧವ್ಯ ಗಟ್ಟಿಯಾಗಲಿದೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಶುಭದಿನ: 10. ಸೌಂದರ್ಯ ಲಹರಿ ಪಠಿಸಿರಿ.





ಉದ್ಯೋಗದಲ್ಲಿ ನಿಮ್ಮ ಹಿಡಿತ ಗಟ್ಟಿಯಾಗಲಿದೆ. ಆತ್ಮವಿಶ್ವಾಸ ಹೆಚ್ಚಾಗಲಿದೆ. ಸೋದರ ಸೋದರಿಯರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಈ ವಾರ ನಿಮ್ಮ ಪಾಲಿಗೆ ಅದೃಷ್ಟ ಕೈ ಹಿಡಿಯಲಿದೆ. ಪೋಷಕರ ಸಂತೋಷಕ್ಕಾಗಿ ಅವರ ಅಗತ್ಯಗಳನ್ನು ಪೂರೈಸಲಿದ್ದೀರಿ. ವೈವಾಹಿಕ ಜೀವನದ ಸಂತೋಷಕ್ಕಾಗಿ ಪ್ರಯತ್ನಿಸಲಿದ್ದೀರಿ. ಶುಭದಿನ: 11. ಲಕ್ಷ್ಮೀನರಸಿಂಹ ಜಪ ಮಾಡಿರಿ.





ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ. ಕಿರು ಪ್ರಯಾಣ ಕೈಗೊಳ್ಳುವ ಯೋಗ ಇದೆ. ನಿಮ್ಮ ಧೈರ್ಯ ಹೆಚ್ಚಾಗಲಿದೆ. ಸಾಮಾಜಿಕ ಕಾರ್ಯಕ್ರಮಗಳಲ್ಲಿ ಆಸಕ್ತಿ ಹೆಚ್ಚಾಗಲಿದೆ. ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡಬಹುದು. ಉದ್ಯೋಗ ಸ್ಥಳದಲ್ಲಿ ಒತ್ತಡ ಹೆಚ್ಚಾಗಬಹುದು. ಮಕ್ಕಳ ಭವಿಷ್ಯದ ಸಲುವಾಗಿ ಅತಿ ಮುಖ್ಯವಾದ ತೀರ್ಮಾನ ಮಾಡಲಿದ್ದೀರಿ. ಹಣಕಾಸು ವಿಷಯದಲ್ಲಿ ಲಾಭ ಇದೆ. ಶುಭದಿನ: 10. ವಿಷ್ಣು ಸಹಸ್ರನಾಮ ಪಠಿಸಿರಿ.




ವ್ಯಾಪಾರದಲ್ಲಿ ಯಶಸ್ಸು ಪಡೆಯಲಿದ್ದೀರಿ. ಕೌಟುಂಬಿಕ ವಿಷಯದಲ್ಲಿ ಮುಖ್ಯ ತೀರ್ಮಾನ ಮಾಡಲಿದ್ದೀರಿ. ಸಂಗಾತಿ ಹಾಗೂ ಮಕ್ಕಳ ಜತೆಗೆ ಉತ್ತಮ ಸಮಯ ಕಳೆಯಲಿದ್ದೀರಿ. ಸಮಾಜದಲ್ಲಿ ಉತ್ತಮ ಹೆಸರು ಪಡೆಯಲಿದ್ದೀರಿ. ವಾರಾಂತ್ಯಕ್ಕೆ ಸರಿಯುತ್ತಾ ನೀವು ಅಂದುಕೊಂಡಿದ್ದಕ್ಕಿಂತ ಸಕಾರಾತ್ಮಕ ಹಾಗೂ ಆಶಾದಾಯಕವಾದ ಫಲಿತಾಂಶಗಳು ದೊರೆಯಲಿವೆ. ಶುಭದಿನ: 09. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.





ಪೋಷಕರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ನಿಮ್ಮ ಕೈ ಮೇಲಾಗಲಿದೆ. ನಿಮ್ಮ ಖರ್ಚಿನ ಮೇಲೆ ಹಿಡಿತ ಇರಲಿ. ಆರೋಗ್ಯ ಉತ್ತಮವಾಗಿರುತ್ತದೆ. ನಿಮ್ಮಲ್ಲಿ ಧೈರ್ಯ ಹೆಚ್ಚಾಗಲಿದೆ. ಕುಟುಂಬದಲ್ಲಿ ಸಾಮರಸ್ಯ ಇರಲಿದೆ. ಸೋದರ ಸೋದರಿಯರ ಜತೆಗಿನ ಈ ಹಿಂದಿನ ಭಿನ್ನಾಭಿಪ್ರಾಯಗಳು ನಿವಾರಣೆ ಆಗಲಿವೆ. ಶುಭದಿನ: 08. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.





ಹಣಕಾಸು ಲಾಭ ಗಳಿಸುವ ಯೋಗ ಇದೆ. ನಿಮ್ಮ ಜ್ಞಾನ ಹಾಗೂ ಬೌದ್ಧಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರಗತಿ ಕಾಣಲಿದ್ದೀರಿ. ಖರ್ಚಿನ ಪ್ರಮಾಣ ಹೆಚ್ಚಾಗಲಿದೆ. ನಿಮ್ಮ ವರ್ಚಸ್ಸಿಗೆ ಧಕ್ಕೆ ತರುವುದಕ್ಕೆ ವಿರೋಧಿಗಳು ಪ್ರಯತ್ನ ಪಡಬಹುದು. ವಾರಾಂತ್ಯಕ್ಕೆ ಬಿಡುವಿಲ್ಲದ ಕೆಲಸ ಇರುತ್ತದೆ. ಶುಭದಿನ: 07. ಚಂಡಿ ಪಾರಾಯಣ ಮಾಡಿರಿ.





ಉದ್ಯೋಗ ಸ್ಥಳದಲ್ಲಿ ನಿಮಗೆ ಅನುಕೂಲಕರವಾದ ಸನ್ನಿವೇಶ ಇರಲಿದೆ. ದೈಹಿಕ ಕ್ಷಮತೆ ಉತ್ತಮವಾಗಿರುತ್ತದೆ. ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ನಿವಾರಣೆ ಆಗುತ್ತವೆ. ಸಮಾಜದಲ್ಲಿ ಪ್ರಭಾವಿಗಳಾಗಿ ಹೊರಹೊಮ್ಮಲಿದ್ದೀರಿ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವಿಚಾರದಲ್ಲಿ ಪ್ರಗತಿ ಇದೆ. ನಿಮ್ಮ ಗುರಿ ತಲುಪುವ ನಿಟ್ಟಿನಲ್ಲಿ ಆಲಸ್ಯವನ್ನು ಬಿಡಬೇಕಾಗುತ್ತದೆ. ಶುಭದಿನ: 10. ದತ್ತಗುರು ಚರಿತ್ರೆ ಪಠಿಸಿರಿ.





ಈ ಅವಧಿಯಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಇದೆ. ಆರೋಗ್ಯ ಉತ್ತಮವಾಗಿರುತ್ತದೆ. ತಾತ್ಕಾಲಿಕ ಉದ್ಯೋಗ ಮಾಡುತ್ತಿರುವವರಿಗೆ ಕಾಯಂ ಆಗುವ ಯೋಗ. ಮಕ್ಕಳ ಪ್ರಗತಿಯಿಂದ ಮನಸಿಗೆ ಸಂತೋಷವಾಗುತ್ತದೆ. ಶೈಕ್ಷಣಿಕವಾಗಿ ಸಮಗ್ರವಾದ ಯಶಸ್ಸು ಪಡೆಯುವ ಅವಕಾಶ ಇದೆ. ಶುಭದಿನ: 11. ಲಲಿತಾ ಸಹಸ್ರನಾಮ ಪಠಿಸಿರಿ.




ಹೂಡಿಕೆ ಲಾಭದಾಯಕವಾಗಿ ಇರಲಿದೆ. ಕಾನೂನು ವ್ಯವಹಾರಗಳಲ್ಲಿ ನಿಮ್ಮ ಕೈ ಮೇಲಾಗಲಿದೆ. ದೊಡ್ಡ ಸಂಸ್ಥೆಗಳ ಜತೆಗೆ ವೃತ್ತಿಪರ ಒಪ್ಪಂದಕ್ಕೆ ಬರುವ ಅವಕಾಶಗಳು ಇವೆ. ಮಕ್ಕಳ ಜತೆಗೆ ಸಂತೋಷವಾದ ಸಮಯ ಕಳೆಯಲಿದ್ದೀರಿ. ದೊಡ್ಡ ಮಟ್ಟದಲ್ಲಿ ಮನ್ನಣೆ ದೊರೆಯಲಿದೆ. ವೃತ್ತಿಜೀವನದಲ್ಲಿ ಸಕಾರಾತ್ಮಕವಾದ ಬೆಳವಣಿಗೆ ಕಾಣಲಿದ್ದೀರಿ. ಶುಭದಿನ: 12. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಸಮಾಜದ ಪ್ರಮುಖರು ನಿಮ್ಮ ಕಠಿಣ ಪರಿಶ್ರಮವನ್ನು ಗುರುತಿಸಲಿದ್ದಾರೆ. ಮುಖ್ಯ ಹುದ್ದೆಯಲ್ಲಿ ಇರುವವರಿಗೆ ಹಿಡಿತ ಗಟ್ಟಿ ಮಾಡಿಕೊಳ್ಳಲು ಅವಕಾಶ ದೊರೆಯಲಿದೆ. ಆರೋಗ್ಯದಲ್ಲಿ ಏರಿಳಿತ ಇರಲಿದೆ. ವಾರಾಂತ್ಯಕ್ಕೆ ಸಾಮಾಜಿಕ, ರಾಜಕೀಯ ಜೀವನದಲ್ಲಿ ಸಕಾರಾತ್ಮಕ ಬೆಳವಣಿಗೆ ಕಾಣಲಿದ್ದೀರಿ. ವಾರಾಂತ್ಯಕ್ಕೆ ನಾನಾ ಮೂಲಗಳಿಂದ ಸಕಾರಾತ್ಮಕ ಬೆಳವಣಿಗೆ ಕಾಣಲಿದ್ದೀರಿ. ಶುಭದಿನ: 09. ಲಕ್ಷ್ಮಿ ಕನಕಧಾರಾ ಸ್ತೋತ್ರ ಪಠಿಸಿರಿ.




ಸೋದರ ಸಂಬಂಧಿಗಳ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಕ್ರಿಯೇಟಿವ್ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರಗತಿ ಇದೆ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಅಗತ್ಯ ದಾಖಲೆ ಪತ್ರಗಳನ್ನು ಜೋಪಾನವಾಗಿ ಇಟ್ಟುಕೊಳ್ಳಿ. ವಾರಾಂತ್ಯಕ್ಕೆ ನೀವು ನಿರೀಕ್ಷೆ ಮಾಡಿದಂತೆಯೇ ಶುಭ ಫಲಗಳು ಕಂಡುಬರುತ್ತವೆ. ಶುಭದಿನ: 07. ಶಿವಕವಚ ಪಠಿಸಿರಿ.